ವಾವಿಸಂ:668

## ಸಾಹಿತ್ಯ ಸಮ್ಮೇಳನ ಕಲಾವಿದರು ಮತ್ತು ಕಲಾತಂಡಗಳಿಂದ ಅರ್ಜಿ ಆಹ್ವಾನ ಡಿ.10 ಕೊನೆಯ ದಿನ

**ಧಾರವಾಡ (ಕರ್ನಾಟಕ ವಾರ್ತೆ) ಡಿ.05:** 2019 ಜನೇವರಿ 4, 5 ಮತ್ತು 6 ರಂದು ಧಾರವಾಡದಲ್ಲಿ ನಡೆಯಲಿರುವ ಅಖಿಲ ಭಾರತ 84ನೆಯ ಕನ್ನಡ ಸಾಹಿತ್ಯ ಸಮ್ಮೇಳನದ ಮೆರವಣಿಗೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿಚ್ಛಿಸುವ ಕಲಾವಿದರು, ಸಾಂಸ್ಕೃತಿಕ ಕಲಾ ತಂಡಗಳು ತಮ್ಮ ಹೆಸರುಗಳನ್ನು ನೋಂದಾಯಿಕೊಳ್ಳಲು ಕೋರಲಾಗಿದೆ.

ಧಾರವಾಡದ ಆರ್.ಎನ್. ಶೆಟ್ಟಿ ಕ್ರೀಡಾಂಗಣದ ಎದುರು ಇರುವ ಜಿಲ್ಲಾ ಸಾಹಿತ್ಯ ಭವನದಲ್ಲಿ ತೆರೆಯಲಾದ ಅಖಿಲ ಭಾರತ 84ನೆಯ ಕನ್ನಡ ಸಾಹಿತ್ಯ ಸಮ್ಮೇಳನ ಸಮಿತಿಯ ಕಾರ್ಯಾಲಯದಲ್ಲಿ ಕಲಾತಂಡ ಮತ್ತು ಕಲಾವಿದರು ತಮ್ಮ ಪರಿಚಯ ಪತ್ರ, ಕಾರ್ಯಕ್ರಮದ ವಿವರ ಮತ್ತು ಅಗತ್ಯ ಮಾಹಿತಿಯೊಂದಿಗೆ ತಮ್ಮ ಹೆಸರನ್ನು ಡಿಸೆಂಬರ್ 10ರೊಳಗಾಗಿ ನೊಂದಾಯಿಸಿಕೊಳ್ಳಬೇಕು.

ಅಖಿಲ ಭಾರತ 84ನೆಯ ಕನ್ನಡ ಸಾಹಿತ್ಯ ಸಮ್ಮೇಳನದ ಮೆರವಣಿಗೆ ಮತ್ತು ಸಾಂಸ್ಕೃತಿಕ ಸಮಿತಿಗಳು ಕಲಾತಂಡ ಮತ್ತು ಕಲಾವಿದರನ್ನು ಆಯ್ಕೆ ಮಾಡಲಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಲಿಂಗರಾಜ ಅಂಗಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

******************